ಕರ್ನಾಟಕ ಸರ್ಕಾರ

# ಆಯ್ಕೆ ಪ್ರಾಧಿಕಾರಿ ಹಾಗೂ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, _____________ ಇವರ ಕಾರ್ಯಾಲಯ

## ಆನ್‌ಲೈನ್ ಮೂಲಕ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರ ಪ್ರಾಥಮಿಕ ಶಿಕ್ಷಕರ ಹುದ್ದೆಗಳ (6–8 ತರಗತಿಗಳ) ಸ್ಪರ್ಧಾತ್ಮಕ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಮುಖ್ಯವಾದ ಸೂಚನೆಗಳ ಹೊತ್ತಿಗೆ.

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8 ತರಗತಿಗಳ) ವೃಂದದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಸ್ಪರ್ಧಾತ್ಮ ಪರೀಕ್ಷೆ ಮೂಲಕ ಅಂದರೆ ದಿ ಕರ್ನಾಟಕ ಎಜುಕೇಷನ್ ಡಿಪಾರ್ಟ್‌ಮೆಂಟ್ ಸರ್ವೀಸಸ್ [ಡಿಪಾರ್ಟ್‌ಮೆಂಟ್ ಆಫ್ ಪಬ್ಲಿಕ್ ಇನ್‌ಸ್ಟ್ರಕ್ಷನ್] [ರೆಕ್ರೂಟ್‌ಮೆಂಟ್][ಅಮೆಂಡ್‌ಮೆಂಟ್] ರೂಲ್ಸ್–2017 ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ: 07.08.2017ರ ನಿಯಮಗಳನ್ವಯ ಆಯ್ಕೆ ಮಾಡಲು ಈ ನೇಮಕಾತಿ ಅಧಿಸೂಚನೆ ಹೊರಡಿಸಿದೆ. ನೇಮಕಾತಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನ ಅಂದರೆ ದಿನಾಂಕ: 25–9–2017 ಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳಿಂದ ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆಯಲಾಗಿದೆ. ಇತರೆ ಬೇರೆ ಯಾವುದೇ ನಮೂನೆಯಲ್ಲಿ ಸಲ್ಲಿಸುವ ಅರ್ಜಿಗಳನ್ನು ನೇಮಕಾತಿಗಾಗಿ ಪರಿಗಣಿಸಲಾಗುವುದಿಲ್ಲ.

2. ಆಯ್ಕೆ ಮಾಡಲು ಉಲ್ಲೇಖದಲ್ಲಿ ನಮೂದಿಸಿರುವ ನೇಮಕಾತಿ ನಿಯಮಗಳು, ಮೀಸಲಾತಿ ನಿಯಮಗಳು ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ಸರ್ಕಾರದ ಆದೇಶಗಳ ಪ್ರಕಾರ ಇರುವ ಪ್ರಚಲಿತ ನಿಯಮಗಳನ್ನು ಅನುಸರಿಸಿ ಆಯ್ಕೆ ಮಾಡಲು ಪ್ರಕಟಣೆಯನ್ನು ಸಾರ್ವಜನಿಕರ ತಿಳುವಳಿಕೆಗಾಗಿ ನೀಡಲಾಗಿದೆ.

**ಟಿಪ್ಪಣಿ:** 1) ಈ ಅಧಿಸೂಚನೆಯು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.
2) ಈಗ ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

3. ಈ ಮೇಲಿನ ಹುದ್ದೆಗಳ ಸಂಖ್ಯೆಗನುಗುಣವಾಗಿ ಮೀಸಲಾತಿಯು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. (ವರ್ಗೀಕರಣವನ್ನು ಕೊನೆಯಲ್ಲಿ ತೋರಿಸಲಾಗಿದೆ).
4. ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಃ 25–09–2017 ಆಗಿರುತ್ತದೆ.

5. ONLINE ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಈ ಕೆಳಕಂಡ ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆದು ಪೂರ್ಣವಾಗಿ ತುಂಬಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಸಹಾಯವಾಣಿ ಸಂಖ್ಯೆ:

1. **ಅರ್ಜಿಯನ್ನು ತುಂಬಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕ: 26-08-2017**
2. **ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ 25-09-2017.**
3. **ನಿಗದಿತ ಶುಲ್ಕ ಬ್ಯಾಂಕ್‌ಗೆ ಪಾವತಿಸಲು ಕೊನೆಯ ದಿನಾಂಕ 27-09-2017**

ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು ಸೂಕ್ತವಾಗಿರುತ್ತದೆ.

6. **ಅರ್ಜಿ ಸಲ್ಲಿಸಲು ಪಾವತಿಸಲಬೇಕಾದ ಶುಲ್ಕ:**

**(ರೂ.ಗಳಲ್ಲಿ)**

| **ಕ್ರ.ಸಂ.** | **ವಿವರಗಳು** | **ಒಂದು ಹುದ್ದೆಗೆ** | | | **ಎರಡು ಹುದ್ದೆಗಳಿಗೆ** | | |
|---|---|---|---|---|---|---|---|
| | | **ಪರೀಕ್ಷಾ ಶುಲ್ಕ** | **ಬ್ಯಾಂಕ್ ವೆಚ್ಚ** | **ಒಟ್ಟು** | **ಪರೀಕ್ಷಾ ಶುಲ್ಕ** | **ಬ್ಯಾಂಕ್ ವೆಚ್ಚ** | **ಒಟ್ಟು** |
| 01 | ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಪ್ರವರ್ಗ-1/ ಅಂಗವಿಕಲ ಅಭ್ಯರ್ಥಿಗಳಿಗೆ | 500-00 | 10-00 | 510-00 | 1000-00 | 10-00 | 1010-00 |
| 02 | ಇತರೆ ಎಲ್ಲಾ ಅಭ್ಯರ್ಥಿಗಳಿಗೆ | 1000-00 | 10-00 | 1010-00 | 2000-00 | 10-00 | 2010-00 |

**ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ.**

7. ಒಂದು ವೇಳೆ ಅಭ್ಯರ್ಥಿಗಳು ONLINE ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ತಿದ್ದುಪಡಿ ಮಾಡಲು ಇಚ್ಛಿಸಿದಲ್ಲಿ ಹೊಸ ಅರ್ಜಿಯನ್ನು ಸಲ್ಲಿಸತಕ್ಕದ್ದು.
8. ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಹಾಗೂ ಸದರಿ ಬ್ಯಾಂಕ್ ಸಮಯದೊಳಗೆ ಆನ್‌ಲೈನ್ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಯಲ್ಲಿ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿದ ಚಲನ್ ಮೂಲಕ ಮಾತ್ರವೇ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಇಲ್ಲಿ ಶುಲ್ಕವನ್ನು ಪಾವತಿಸಬೇಕು. ಬೇರಾವುದೇ ಬ್ಯಾಂಕ್‌ನಲ್ಲಿ ಅಥವಾ ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇತರೆ ಯಾವುದೇ ಸ್ವರೂಪದಲ್ಲಿ ಶುಲ್ಕ ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

9. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

10. ಮೀಸಲಾತಿ ಕೋರುವ ಎಲ್ಲಾ ಪ್ರಮಾಣ ಪತ್ರಗಳ ನಮೂನೆಗಳನ್ನು ಮಾಹಿತಿ ಪುಸ್ತಕದಲ್ಲಿ ಕೊಟ್ಟಿರುವಂತೆ ಅಥವಾ ಅನ್ವಯಿಸುವ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ನಿರ್ದಿಷ್ಟ ನಮೂನೆಯಲ್ಲಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ONLINE ಮೂಲಕ ಅರ್ಜಿ ಸಲ್ಲಿಸುವ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

11. ಅಭ್ಯರ್ಥಿಗಳು ONLINE ಅರ್ಜಿ ಮೂಲಕ ನೀಡಿರುವ ಮಾಹಿತಿಗಳ ಬಗ್ಗೆ ಯಾವುದೇ ಹಂತದಲ್ಲೂ ಬದಲಾವಣೆಗೆ ಅವಕಾಶವಿರುವುದಿಲ್ಲ.

12. ONLINE ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ಯಾವುದೇ ಹಂತದಲ್ಲಿ ಅಪೂರ್ಣ / ಅಸ್ಪಷ್ಟ / ತಪ್ಪು ಮಾಹಿತಿ ನೀಡಿದಲ್ಲಿ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.

13. ಯಾವುದೇ ದಾಖಲೆಗಳನ್ನು ಅಂಚೆ ಮೂಲಕವಾಗಲೀ ಅಥವಾ ಮುದ್ದಾಂ ಆಗಲಿ ಸಲ್ಲಿಸಕೂಡದು.

**14.** ಮೀಸಲಾತಿಯಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು **ONLINE ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು, ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ /ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.**

15. ಎಲ್ಲಾ ಅರ್ಹ ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಹಾಗೂ ನಿಗದಿತ ಶುಲ್ಕ ಪಾವತಿಸಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಚಲನ್‌ನ ಸಿಎಸಿ ಕಚೇರಿ ಪ್ರತಿ ಮತ್ತು ಅಭ್ಯರ್ಥಿ ಚಲನ್ ಪ್ರತಿಯನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

16. ಮುದ್ರಿತ ಅರ್ಜಿಯು ಒಂದು ವೇಳೆ ಕಳೆದು ಹೋದಲ್ಲಿ ಮೇಲೆ ತಿಳಿಸಿದ ವೆಬ್‌ಸೈಟ್‌ನಲ್ಲಿ ಪುನಃ GENERATE APPLICATION ಎಂಬ ಬಟನ್ ಕ್ಲಿಕ್ ಮಾಡಿ ಪ್ರತಿಯನ್ನು ಪಡೆದುಕೊಳ್ಳಬಹುದು.

*17.* ***<u>ಸ್ಪರ್ಧಾತ್ಮಕ ಪರೀಕ್ಷಾ ವಿಧಾನ</u> :***

***18.* I. *<u>ಪರೀಕ್ಷೆ ನಡೆಸುವ ಪ್ರಾಧಿಕಾರಿ</u>:*** ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಯ್ಕೆ ಪ್ರಾಧಿಕಾರಿ ಹಾಗು ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ತಮ್ಮ ಜಿಲ್ಲೆಗಳಲ್ಲಿ, ಜಿಲ್ಲಾ ಮಟ್ಟದಲ್ಲಿ ನಡೆಸುವರು.

**ಶೇಕಡಾ 100 ರಷ್ಟರ 23 ಜಿಲ್ಲೆಗಳು ಮತ್ತು ಶೇಕಡಾ 92 ರಷ್ಟರ 2 ಜಿಲ್ಲೆಗಳು(ಬೆಂಗಳೂರು ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳು) ಒಟ್ಟು 25 ಜಿಲ್ಲೆಗಳಲ್ಲಿ ಪರೀಕ್ಷೆಯನ್ನು ನಡೆಸಲಾಗುವುದು.**

**(ಕರ್ನಾಟಕದ 34 ಶೈಕ್ಷಣಿಕ ಜಿಲ್ಲೆಗಳಿಂದಲೂ ಸಹ ಅಭ್ಯರ್ಥಿಗಳು ಭಾಗವಹಿಸಬಹುದು)**

ಒಂದನೆಯ ಪರೀಕ್ಷೆ ನಡೆಸುವ ದಿನಾಂಕ : **04–11–2017 ಮತ್ತು 05–11–2017.**

***ಪರೀಕ್ಷಾ ಅವಧಿ ಹಾಗೂ ಸಮಯ:***

| | |
|---|---|
| **ದಿ: 04–11–2017** | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ (ಪೇಪರ್–1)<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿ:04–11–2017** | ಮಧ್ಯಾಹ್ನ 2.30 ರಿಂದ 05.30 ಗಂಟೆ (ಪೇಪರ್–2)<br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(02.30 ರಿಂದ 03.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>03.30 ರಿಂದ 05.30 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:05–11–2017** | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ರವರೆಗೆ. (ಪೇಪರ್–2)<br>ಗಣಿತ ಮತ್ತು ವಿಜ್ಞಾನ / ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ: 05–11–2017** | ಮಧ್ಯಾಹ್ನ 2.30 ರಿಂದ 04.30 ಗಂಟೆ. (ಪೇಪರ್–3) (ವಿವರಣಾತ್ಮಕ ಪರೀಕ್ಷೆ)<br>ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ:** ಪದವೀಧರ ಪ್ರಾಥಮಿಕ ಶಿಕ್ಷಕರ (6ರಿಂದ 8ನೇ ತರಗತಿಗಳ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್–1 ಮತ್ತು ಪೇಪರ್–2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್–2 ರಲ್ಲಿ ಕಡ್ಡಾಯವಾಗಿ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು.

ಪೇಪರ್–3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 60 ಅಂಕಗಳನ್ನು ಗಳಿಸಬೇಕು.

ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

**ಎರಡನೆಯ** ಪರೀಕ್ಷೆ ನಡೆಸುವ ದಿನಾಂಕ : **11-11-2017 ಮತ್ತು 12-11-2017.**

**ಹೈದರಾಬಾದ್ -ಕರ್ನಾಟಕ ಜಿಲ್ಲೆಗಳ ಶೇಕಡಾ 80 ರಷ್ಟು ಸ್ಥಳೀಯ ಅಭ್ಯರ್ಥಿಗಳಿಗೆ ಮಾತ್ರ 06 ಜಿಲ್ಲೆಗಳಲ್ಲಿ ಪರೀಕ್ಷೆಯನ್ನು ನಡೆಸಲಾಗುವುದು.**

**(ಹೈದರಾಬಾದ್-ಕರ್ನಾಟಕದ 06 ಜಿಲ್ಲೆಗಳ ಅಭ್ಯರ್ಥಿಗಳು ಮಾತ್ರ ಭಾಗವಹಿಸಬಹುದು)**

**ಪರೀಕ್ಷಾ ಅವಧಿ ಹಾಗೂ ಸಮಯ:**

| | |
|---|---|
| **ದಿ: 11-11-2017** | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ *(*ಪೇಪರ್-1)<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿ:11-11-2017** | ಮಧ್ಯಾಹ್ನ 2.30 ರಿಂದ 05.30 ಗಂಟೆ *(*ಪೇಪರ್-2)<br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(02.30 ರಿಂದ 03.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>03.30 ರಿಂದ 05.30 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:12-11-2017** | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ರವರೆಗೆ. *(*ಪೇಪರ್-2)<br>ಗಣಿತ ಮತ್ತು ವಿಜ್ಞಾನ / ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ: 12-11-2017** | ಮಧ್ಯಾಹ್ನ 2.30 ರಿಂದ 04.30 ಗಂಟೆ. *(*ಪೇಪರ್-3) (ವಿವರಣಾತ್ಮಕ ಪರೀಕ್ಷೆ)<br>ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ:** ಪದವೀಧರ ಪ್ರಾಥಮಿಕ ಶಿಕ್ಷಕ (6ರಿಂದ 8ನೇ ತರಗತಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್-1 ಮತ್ತು ಪೇಪರ್-2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್-2 ರಲ್ಲಿ ಕಡ್ಡಾಯವಾಗಿ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು.

ಪೇಪರ್-3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 60 ಅಂಕಗಳನ್ನು ಗಳಿಸಬೇಕು.

ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

ಮೂರನೆಯ ಪರೀಕ್ಷೆ ನಡೆಸುವ ದಿನಾಂಕ : **18–11–2017 ಮತ್ತು 19–11–2017.**

**ಹೈದರಾಬಾದ್ –ಕರ್ನಾಟಕ ಜಿಲ್ಲೆಗಳ ಶೇಕಡಾ 20 ರಷ್ಟು ಉಳಿದ ಮೂಲ ವೃಂದದ ಅಭ್ಯರ್ಥಿಗಳಿಗೆ ಮಾತ್ರ 06 ಜಿಲ್ಲೆಗಳಲ್ಲಿ ಮಾತ್ರ ಪರೀಕ್ಷೆಯನ್ನು ನಡೆಸಲಾಗುವುದು.**

**(ಕರ್ನಾಟಕದ 34 ಜಿಲ್ಲೆಗಳಿಂದಲೂ ಸಹ ಅಭ್ಯರ್ಥಿಗಳು ಭಾಗವಹಿಸಬಹುದು)**

**ಪರೀಕ್ಷಾ ಅವಧಿ ಹಾಗೂ ಸಮಯ:**

| | |
|---|---|
| **ದಿ:18–11–2017** | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ (ಪೇಪರ್–1)<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿ:18–11–2017** | ಮಧ್ಯಾಹ್ನ 2.30 ರಿಂದ 05.30 ಗಂಟೆ (ಪೇಪರ್–2)<br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(02.30 ರಿಂದ 03.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>03.30 ರಿಂದ 05.30 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:19–11–2017** | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ರವರೆಗೆ. (ಪೇಪರ್–2)<br>ಗಣಿತ ಮತ್ತು ವಿಜ್ಞಾನ / ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:19–11–2017** | ಮಧ್ಯಾಹ್ನ 2.30 ರಿಂದ 04.30 ಗಂಟೆ. (ಪೇಪರ್–3) (ವಿವರಣಾತ್ಮಕ ಪರೀಕ್ಷೆ)<br>ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ:**ಪದವೀಧರ ಪ್ರಾಥಮಿಕ ಶಿಕ್ಷಕ (6ರಿಂದ 8ನೇ ತರಗತಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್–1 ಮತ್ತು ಪೇಪರ್–2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್–2 ರಲ್ಲಿ ಕಡ್ಡಾಯವಾಗಿ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು.

ಪೇಪರ್–3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 60 ಅಂಕಗಳನ್ನು ಗಳಿಸಬೇಕು.

ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

**ನಾಲ್ಕನೆಯ ಪರೀಕ್ಷೆ ನಡೆಸುವ ದಿನಾಂಕ : 25-11-2017 ಮತ್ತು 26-11-2017.**

**ಹೈದರಾಬಾದ್ -ಕರ್ನಾಟಕ ಜಿಲ್ಲೆಗಳ ಶೇಕಡಾ 08 ರಷ್ಟು ಸ್ಥಳೀಯ ಅಭ್ಯರ್ಥಿಗಳಿಂದ ಬೆಂಗಳೂರು ನಗರ ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳ ಬಿ.ಬಿ.ಎಂ.ಪಿ ಭಾಗದಲ್ಲಿನ ಹುದ್ದೆಗಳಿಗೆ ಭರ್ತಿ ಮಾಡಲಾಗುವುದು.**

**02 ಜಿಲ್ಲೆಗಳಲ್ಲಿ ಮಾತ್ರ ಪರೀಕ್ಷೆಯನ್ನು ನಡೆಸಲಾಗುವುದು.**

***ಪರೀಕ್ಷಾ ಅವಧಿ ಹಾಗೂ ಸಮಯ:***

| | |
|---|---|
| **ದಿ:25-11-2017** | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ ***(***ಪೇಪರ್-1)<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿ:25-11-2017** | ಮಧ್ಯಾಹ್ನ 2.30 ರಿಂದ 05.30 ಗಂಟೆ ***(***ಪೇಪರ್-2)<br><br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(02.30 ರಿಂದ 03.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>03.30 ರಿಂದ 05.30 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:26-11-2017** | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ರವರೆಗೆ. ***(***ಪೇಪರ್-2)<br><br>ಗಣಿತ ಮತ್ತು ವಿಜ್ಞಾನ / ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:26-11-2017** | ಮಧ್ಯಾಹ್ನ 2.30 ರಿಂದ 04.30 ಗಂಟೆ. ***(***ಪೇಪರ್-3)<br>(ವಿವರಣಾತ್ಮಕ ಪರೀಕ್ಷೆ) ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ:** ಪದವೀಧರ ಪ್ರಾಥಮಿಕ ಶಿಕ್ಷಕ (6ರಿಂದ 8ನೇ ತರಗತಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್-1 ಮತ್ತು ಪೇಪರ್-2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್-2 ರಲ್ಲಿ ಕಡ್ಡಾಯವಾಗಿ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು.

ಪೇಪರ್-3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 60 ಅಂಕಗಳನ್ನು ಗಳಿಸಬೇಕು.

ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

***17] ಪ್ರಶ್ನೆ ಪತ್ರಿಕೆಯಲ್ಲಿನ ವಿಷಯ ಹಾಗೂ ಅಂಕಗಳು :***

ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಪತ್ರಿಕೆಗೆ ಕೋಷ್ಠಕದಲ್ಲಿ ಸೂಚಿಸಿರುವಂತೆ ಅಂಕಗಳನ್ನು ನಿಗದಿಪಡಿಸಲಾಗಿದೆ.

***ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ ಕೆಳಗಿನಂತಿದೆ***

***ಪೇಪರ್–1***

***ಬಹು ಆಯ್ಕೆಯ ಪ್ರಶ್ನೆಗಳು (ಒಎಂಆರ್ ಶೀಟ್‌ನಲ್ಲಿ ಉತ್ತರಿಸಬೇಕಾದ ಪರೀಕ್ಷೆ)***

| ಕ್ರ.ಸಂ | ವಿಷಯ | ಅಂಕಗಳು |
|---|---|---|
| 01 | ಸಾಮಾನ್ಯ ಕನ್ನಡ ಭಾಷೆ | 25 |
| 02 | ಸಾಮಾನ್ಯ ಆಂಗ್ಲ ಭಾಷೆ | 25 |
| 03 | ಸಾಮಾನ್ಯ ಜ್ಞಾನ (ಪ್ರಚಲಿತ ವಿದ್ಯಮಾನಗಳು) | 25 |
| 04 | ಶೈಕ್ಷಣಿಕ ಮನೋವಿಜ್ಞಾನ ಮತ್ತು ವಿಕಸನ + ಬೋಧನಾ ವಿಧಾನ | 50 |
| 05 | ಮೌಲ್ಯಶಿಕ್ಷಣ ಮತ್ತು ಆರೋಗ್ಯ ಶಿಕ್ಷಣ | 15 |
| 06 | ಗಣಕ ಯಂತ್ರ ಪ್ರಬುದ್ಧತೆ ಬಗ್ಗೆ | 10 |
| | ಒಟ್ಟು | 150 |

**ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ ಪೇಪರ್–2**

| ಭಾಷೆ–ಆಂಗ್ಲ, ಗಣಿತ & ವಿಜ್ಞಾನ ಹಾಗು ಸಮಾಜ ಪಾಠಗಳು ಶಿಕ್ಷಕರಿಗೆ ಮಾತ್ರ | | |
|---|---|---|
| ಕ್ರ.ಸಂ | ವಿಷಯ | ಅಂಕಗಳು |
| 01 | ಆಯಾ ವಿಷಯದ ಜ್ಞಾನ – ಬಹು ಆಯ್ಕೆಯ ಪ್ರಶ್ನೆಗಳು (ಓಎಂಆರ್‌ಶೀಟ್‌ನಲ್ಲಿ ಉತ್ತರಿಸಬೇಕು) | 50 |
| 02 | ಆಯಾ ವಿಷಯದ ಜ್ಞಾನ – ವಿವರಣಾತ್ಮಕ ಉತ್ತರ ಬರೆಯಬೇಕಾದ ಪ್ರಶ್ನೆಗಳು | 100 |
| | ಒಟ್ಟು | 150 |

ಪೇಪರ್–2 ಪತ್ರಿಕೆಯಲ್ಲಿ ಕನಿಷ್ಟ ಶೇ.50 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ.

**ಭಾಷಾ ಸಾಮರ್ಥ್ಯ ಪರೀಕ್ಷೆ – ಪೇಪರ್–3**

**ಗಣಿತ ಮತ್ತು ವಿಜ್ಞಾನ ಹಾಗು ಸಮಾಜಪಾಠಗಳು ಅಭ್ಯರ್ಥಿಗಳಿಗೆ ಮಾತ್ರ**

| ಕ್ರ.ಸಂ | ವಿಷಯ | ಅಂಕಗಳು |
|---|---|---|
| 01 | ಆಯಾ ಬೋಧನಾ ಮಾಧ್ಯಮದ ಭಾಷಾ ಸಾಮರ್ಥ್ಯ – ವಿವರಣಾತ್ಮಕ ಪರೀಕ್ಷೆ ಅಭ್ಯರ್ಥಿಗಳು ನಿರ್ದಿಷ್ಟಪಡಿಸಿದ ಬೋಧನಾ ಮಾಧ್ಯಮದಲ್ಲಿ ಬೋಧಿಸಲು ಹೊಂದಿರುವ ಭಾಷಾ ಬಳಕೆಯ ಸಾಮರ್ಥ್ಯ, ಗ್ರಹಿಸುವಿಕೆ, ಶಬ್ದಭಂಡಾರ ಮತ್ತು ಬರವಣಿಗೆ ಸಾಮರ್ಥ್ಯಗಳನ್ನು ಪರೀಕ್ಷಿಸಲಾಗುವುದು. | 100 |
| | ಒಟ್ಟು | 100 |

ಪೇಪರ್–3 ಪತ್ರಿಕೆಯಲ್ಲಿ ಕನಿಷ್ಟ ಶೇ. 60 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ.

**ಸೂಚನೆ:** ಅಭ್ಯರ್ಥಿಗಳು ಮೇಲೆ ನಿಗದಿಪಡಿಸಿದ ಕನಿಷ್ಟ ಅಂಕಗಳನ್ನು ಗಳಿಸದೇ ಇದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಎಲ್ಲ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್ ನಿರ್ಧರಿಸಲು ಪರಿಗಣಿಸಲಾಗುವುದು. ಅಂದರೆ, ಭಾಷೆ-ಆಂಗ್ಲ ವಿಷಯದ ಹುದ್ದೆಗೆ ಪೇಪರ್-1 ಮತ್ತು ಪೇಪರ್-2 ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಗಣಿತ ಮತ್ತು ವಿಜ್ಞಾನ ಹಾಗು ಸಮಾಜಪಾಠಗಳು ವಿಷಯಗಳ ಹುದ್ದೆಗಳಿಗೆ ಪೇಪರ್-1, ಪೇಪರ್-2 ಮತ್ತು ಪೇಪರ್-3 ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಪೇಪರ್-3 ರ ಪತ್ರಿಕೆಯು ಭಾಷಾಶಿಕ್ಷಕರು-ಆಂಗ್ಲ ಇವರಿಗೆ ಅನ್ವಯಿಸುವುದಿಲ್ಲ.

### *18] ಪರೀಕ್ಷಾ ವಿಷಯುಗಳಿಗೆ ನಿಗದಿಪಡಿಸಿರುವ ಪಠ್ಯವಸ್ತು:*

ಪ್ರಶ್ನೆಗಳ ವ್ಯಾಪ್ತಿ ಹಾಗೂ ಸ್ವರೂಪ.

***ಅ.*** ಪ್ರಶ್ನೆಗಳು ನಿಗದಿಪಡಿಸಲಾಗಿರುವ ಪಠ್ಯವಸ್ತುವಿನ(ಸಿಲಬಸ್) ವ್ಯಾಪ್ತಿಯಲ್ಲಿ ಬರುತ್ತದೆ. (ವಿವರವಾದ ಪಠ್ಯವಸ್ತು ಅನುಬಂಧ-2 ರಲ್ಲಿ ನೀಡಲಾಗಿದೆ. ಇಲಾಖಾ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಿದೆ.)

***ಆ.*** ಪೇಪರ್-1 ರ ಪ್ರಶ್ನೆಪತ್ರಿಕೆಯ ಪ್ರಶ್ನೆಗಳು ವಸ್ತುನಿಷ್ಠವಾಗಿದ್ದು (objective type) ಪ್ರತಿ ಪ್ರಶ್ನೆಗೆ ಒಂದು ಅಂಕ ನಿಗದಿಪಡಿಸಿದೆ. ಪ್ರತಿ ಪ್ರಶ್ನೆಯು ನಾಲ್ಕು ಉತ್ತರಗಳನ್ನು ಹೊಂದಿದ್ದು, ಇವುಗಳಲ್ಲಿ ಒಂದು ಸರಿ ಉತ್ತರವಾಗಿರುತ್ತದೆ. ಉತ್ತರಗಳನ್ನು 'ಓ.ಎಂ.ಆರ್' ಶೀಟಿನಲ್ಲಿ ಗುರುತಿಸುವುದು.

**ಇ.** **ಪೇಪರ್ -1 ಮತ್ತು ಪೇಪರ್-2 ರ ಪ್ರಶ್ನೆಗಳು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಇರುತ್ತವೆ.**

***ಈ.*** ಪೇಪರ್-2 ರ ಪ್ರಶ್ನೆಪತ್ರಿಕೆಯಲ್ಲಿ ಎರಡು ಭಾಗಗಳಿದ್ದು ಮೊದಲಭಾಗದಲ್ಲಿ ಬಹು ಆಯ್ಕೆಯ ಪ್ರಶ್ನೆಗಳಿಗೆ ಉತ್ತರಗಳನ್ನು 'ಓ.ಎಂ.ಆರ್ ' ಶೀಟಿನಲ್ಲಿ ಗುರುತಿಸುವುದು. ಹಾಗೂ ಎರಡನೇ ಭಾಗದಲ್ಲಿ ವಿವರಣಾತ್ಮಕ ಉತ್ತರವನ್ನು, ಪರೀಕ್ಷಾ ಕೇಂದ್ರದಲ್ಲಿ ನೀಡುವ ಉತ್ತರಪತ್ರಿಕೆಯಲ್ಲಿ ಬರೆಯಬೇಕಾಗುತ್ತದೆ.

ಪೇಪರ್-2 ರ ಪ್ರಶ್ನೆ ಪತ್ರಿಕೆಗೆ ಉತ್ತರಗಳನ್ನು **ಅಭ್ಯರ್ಥಿಯು ಆಯ್ಕೆ ಬಯಸುವ ಹುದ್ದೆಯ ಬೋಧನಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ** ಉತ್ತರಿಸಬೇಕು.

***ಉ.*** ಪೇಪರ್-3 ರ ಪ್ರಶ್ನೆ ಪತ್ರಿಕೆ ವಿವರಣಾತ್ಮಕ ಮಾದರಿಯಾಗಿದ್ದು, ಅಭ್ಯರ್ಥಿಯು ಆಯ್ಕೆ ಬಯಸುವ ವಿಷಯದ ಹುದ್ದೆಯ, ಬೋಧನಾ ಮಾಧ್ಯಮದ ಭಾಷೆಯಲ್ಲಿಯೇ ಉತ್ತರಿಸಬೇಕು.

**iv. ಪರೀಕ್ಷಾ ಪ್ರಶ್ನೆ ಪತ್ರಿಕೆಗಳ ಮಾಧ್ಯಮ : ಕನ್ನಡ ಮತ್ತು ಇಂಗ್ಲೀಷ್.**

ಪ್ರಾಥಮಿಕ ಶಾಲಾ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ಪಠ್ಯ ವಸ್ತುವನ್ನು ಅಂತರ್ಜಾಲ www.schooleducation.kar.nic.in ಅಂತರ್ಜಾಲ ತಾಣದಲ್ಲಿ ಅಳವಡಿಸಲಾಗಿದೆ. ಪಠ್ಯಕ್ರಮವನ್ನು ಅಂತರ್ಜಾಲದಿಂದ ಪಡೆದುಕೊಳ್ಳಬಹುದು.

ಕೊನೆಯ ಪರೀಕ್ಷೆ ಮುಗಿದ ಮೇಲೆ ತಾತ್ಕಾಲಿಕ ಉತ್ತರಗಳನ್ನು ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು, ಪ್ರಕಟಿಸುವ ದಿನಾಂಕವನ್ನು ಮುಂದೆ ತಿಳಿಸಲಾಗುವುದು. ಪ್ರಕಟಿಸಿದ ದಿನಾಂಕದಿಂದ ಈ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಯು ಆಕ್ಷೇಪಣೆಗಳನ್ನು ಐದು ದಿನಗಳೊಳಗಾಗಿ ಸಲ್ಲಿಸಬಹುದು. ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸೂಕ್ತ ಪುರಾವೆಗಳೊಂದಿಗೆ ಸಲ್ಲಿಸಬೇಕು. ಬಂದಂತಹ ಆಕ್ಷೇಪಣೆಗಳನ್ನು ಪರಿಣಿತ ಸಮಿತಿ ಪರಿಶೀಲಿಸುತ್ತದೆ. ನಂತರ ಅಂತಿಮ ಉತ್ತರಗಳನ್ನು ಪ್ರಕಟಿಸಲಾಗುವುದು.

ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ನಿಗದಿಪಡಿಸಿರುವ ಮಾಹಿತಿಯನ್ನು ದೋಷರಹಿತವಾಗಿ ಭರ್ತಿ ಮಾಡಬೇಕು. ಅಪೂರ್ಣ, ದೋಷಪೂರಿತವಾಗಿ ಮಾಹಿತಿ ನಮೂದಿಸಿದ್ದಲ್ಲಿ ಮೌಲ್ಯಮಾಪನದಲ್ಲಿ ಉಂಟಾಗುವ ಗೊಂದಲಕ್ಕೆ ಅಭ್ಯರ್ಥಿಗಳೇ ಕಾರಣರಾಗಿದ್ದು ಅದನ್ನು ಸರಿಪಡಿಸಲು ಅವಕಾಶ ಪರೀಕ್ಷಾ ನಂತರ ಇರುವುದಿಲ್ಲ. ಅಭ್ಯರ್ಥಿಗಳು ತಾವು ತೆಗೆದುಕೊಂಡು ಹೋಗುವ ಕಾರ್ಬನ್‌ಲೆಸ್ ಪ್ರತಿಯನ್ನು ಜೋಪಾನವಾಗಿಟ್ಟುಕೊಳ್ಳಬೇಕು.

ವಿವರಣಾತ್ಮಕ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿದ ನಂತರ ಈ ಅಂಕಗಳನ್ನು ಮೆರಿಟ್‌ಗಾಗಿ ಪರಿಗಣಿಸಲಾಗುವುದು.

## ಪ್ರಮುಖವಾದ ಸೂಚನೆಗಳು:

1. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಮಾತ್ರ ಅರ್ಜಿಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಸಹಾ ಆನ್‌ಲೈನ್ ಮೂಲಕವೇ ಪಡೆಯತಕ್ಕದ್ದು. ಅಭ್ಯರ್ಥಿಯು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹಾಜರಾದ ಮಾತ್ರಕ್ಕೆ ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ. ಅಭ್ಯರ್ಥಿಯು ಇದರ ಜೊತೆಗೆ ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವಯೋಮಿತಿ ಹೊಂದಿರತಕ್ಕದ್ದು.
2. ಅರ್ಜಿಗಳನ್ನು ದಿನಾಂಕ: 25–9–2017 ರೊಳಗೆ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ***ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.***
4. ಪ್ರಮಾಣ ಪತ್ರಗಳ ಪರಿಶೀಲನೆಯ ಸಮಯದಲ್ಲಿ ***ಸುಳ್ಳು ದಾಖಲೆ ಅಥವಾ ಸುಳ್ಳು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾಗುವ ಅವಕಾಶವನ್ನು ಕಳೆದುಕೊಳ್ಳುತ್ತಾರೆ.***
5. ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಗೆ ಹಕ್ಕನ್ನು ಪಡೆದುಕೊಳ್ಳುವುದಿಲ್ಲ.
6. ಮೇಲಿನ ನೇಮಕಾತಿಗಳು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗೆ ಒಳಪಟ್ಟಿರುತ್ತದೆ.
7. ಯಾವುದೇ ಹಂತದಲ್ಲಿ ತಪ್ಪು ಮಾಹಿತಿಯ ಆಧಾರದ ಮೇಲೆ ಆಯ್ಕೆಯಾದ ಅಥವಾ ಅನರ್ಹತೆಯ ಕಾರಣಗಳಿಗಾಗಿ ಅಭ್ಯರ್ಥಿಯ ಹೆಸರನ್ನು ಪಟ್ಟಿಯಿಂದ ಕೈಬಿಡುವ ಅಥವಾ ನೇಮಕಾತಿ ಆದೇಶವನ್ನು ರದ್ದುಗೊಳಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿರುತ್ತದೆ.
8. ಅಭ್ಯರ್ಥಿಗಳು ಅವರ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿಗಳ ಆಧಾರದ ಮೇಲೆ ಅವರಿಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಪ್ರವೇಶ ಪತ್ರಗಳನ್ನು ನೀಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅಂಕಗಳ ಮಾಹಿತಿ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ ಸಂದರ್ಭಗಳಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
9. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಲ್ಲಿಸಿರುವ ಸಂಬಂಧಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು.
10. ಅಭ್ಯರ್ಥಿಗಳು ಸಲ್ಲಿಸಿದ ಆನ್‌ಲೈನ್ ಅರ್ಜಿಯ ಪ್ರತಿ, ಪ್ರವೇಶ ಪತ್ರ, ಶುಲ್ಕ ಪಾವತಿಸಿದ ಚಲನ್‌ಪ್ರತಿ ಹಾಗೂ ಇತರೆ ದಾಖಲೆಗಳನ್ನು ಆಯ್ಕೆ ಪ್ರಕ್ರಿಯೆ ಮುಗಿಯುವ ತನಕ ಸುರಕ್ಷಿತವಾಗಿ ಇಟ್ಟುಕೊಳ್ಳತಕ್ಕದ್ದು.
11. ದುರ್ನಡತೆ: ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು

ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತನೆ ಎಸಗಿದ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಆಯ್ಕೆ ಪ್ರಾಧಿಕಾರದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದೇ ಅಲ್ಲದೇ, ಆಯ್ಕೆ ಪ್ರಾಧಿಕಾರವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಅನರ್ಹರಾಗುತ್ತಾನೆ.

12. ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸುವಾಗ ಮೂಲ ಅರ್ಜಿಯಲ್ಲಿ ದಾಖಲಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಆಕ್ಷೇಪಣೆ ಸಲ್ಲಿಸಬಹುದು. ನಮೂದಿಸಲು ಬಿಟ್ಟುಹೋಗಿದ್ದ ಯಾವುದೇ ಮಾಹಿತಿಯನ್ನು ಹೊಸದಾಗಿ ದಾಖಲಿಸಲು ಅವಕಾಶವಿರುವುದಿಲ್ಲ. ಅಂತಹ ಆಕ್ಷೇಪಣೆ ಮತ್ತು ಲಗತ್ತುಗಳನ್ನು ಪರಿಗಣಿಸಲಾಗುವುದಿಲ್ಲ.
13. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ತಮ್ಮ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ಸಹಿಯನ್ನು, ಹಾಗು ಎಡಗೈ ಹೆಬ್ಬೆಟ್ಟಿನ ಗುರುತನ್ನು ನಿಗದಿತ ಸ್ಥಳಗಳಲ್ಲಿ ಸ್ಕ್ಯಾನ್ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡಬೇಕು.
14. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್‌ನ ಸಂಖ್ಯೆಯನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಒಂದು ವೇಳೆ ಆಧಾರ್ ಕಾರ್ಡ್ ಹೊಂದಿಲ್ಲದಿದ್ದಲ್ಲಿ, ನೊಂದಣಿ ಮಾಡಿಸಿಕೊಂಡು ಇಐಡಿ(EID)ಯು, ಅಂದರೆ 28 ಅಂಕಿಗಳ ಸಂಖ್ಯೆಯನ್ನು ನಮೂದಿಸಬೇಕು. ಅಂತಿಮ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ, ಆಧಾರ್ ನೋಂದಣಿಯ ನೈಜತೆಯನ್ನು ಪರಿಶೀಲಿಸಿ, ಅಭ್ಯರ್ಥಿಯ ಗುರುತಿಸುವಿಕೆಯನ್ನು ಖಾತರಿಪಡಿಸಿಕೊಳ್ಳಲಾಗುವುದು.
15. ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಈ ಸಂಬಂಧ ಆಯ್ಕೆ ಪ್ರಾಧಿಕಾರಿ / ನೇಮಕಾತಿ ಪ್ರಾಧಿಕಾರಿಗಳು ಕಾಲಕಾಲಕ್ಕೆ ನೀಡುವ ಸೂಚನೆಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ [http://schooleducation.kar.nic.in] ನಲ್ಲಿ ಅವಲೋಕಿಸುವುದು.

ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್‌ಸೈಟ್ http://schooleducation.kar.nic.in ರಲ್ಲಿ ನೀಡಿರುವ ಸೂಚನೆಗಳನ್ನು ಗಮನಿಸಬೇಕು. ಹಾಗೂ ಯಾವುದೇ ಹೆಚ್ಚಿನ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ], ಇವರ ಕಛೇರಿಯನ್ನು ಸಂಪರ್ಕಿಸಬಹುದು.

**<u>ಸ್ಪರ್ಧಾತ್ಮಕ ಪರೀಕ್ಷೆಯ ಬಗ್ಗೆ ಅಭ್ಯರ್ಥಿಗಳಿಗೆ ಸೂಚನೆಗಳು</u>**

★ ಈ 04 ಪರೀಕ್ಷೆಗಳಲ್ಲಿ ಎರಡು ವಿಧದ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಾಗುತ್ತದೆ. ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಹಾಗೂ ವಿವರಣಾತ್ಮಕ ಉತ್ತರಗಳನ್ನು ಬರೆಯಲು ಪ್ರತ್ಯೇಕವಾದ ಪ್ರಶ್ನೆಪತ್ರಿಕೆಗಳನ್ನು ನೀಡಲಾಗುವುದು. ಪ್ರಶ್ನೆಪತ್ರಿಕೆ ಪುಸ್ತಿಕೆ ಒಳಭಾಗದಲ್ಲಿ ಓ.ಎಂ.ಆರ್. ಉತ್ತರಪತ್ರಿಕೆಯನ್ನು ಅಳವಡಿಸಲಾಗಿದ್ದು, ಪ್ರಶ್ನೆಪತ್ರಿಕೆ ಪುಸ್ತಿಕೆ ಸೀಲ್ ತೆರೆಯುವಾಗ ಅಭ್ಯರ್ಥಿಗಳು ಜೋಪಾನವಾಗಿ ತೆರೆಯಬೇಕಾಗಿರುತ್ತದೆ. ಪ್ರಶ್ನೆಪತ್ರಿಕೆ ಪುಸ್ತಿಕೆ ಮೇಲೆ ಕ್ರಮಸಂಖ್ಯೆಯನ್ನು ನೀಡಲಾಗಿದೆ. ವಿವರಣಾತ್ಮಕ ಪ್ರಶ್ನೆಗಳನ್ನು ಉತ್ತರಿಸಲು ಪ್ರತ್ಯೇಕ ಖಾಲಿ ಹಾಳೆಗಳುಳ್ಳ ಪುಸ್ತಿಕೆಗಳನ್ನು ನೀಡಲಾಗುವುದು.

★ ಒಂದಕ್ಕಿಂತ ಹೆಚ್ಚು ಜಿಲ್ಲೆಯಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತಾವು ಪಡೆದ ಎಲ್ಲಾ ಪ್ರವೇಶ ಪತ್ರಗಳನ್ನು ನಿಗದಿತ ನಮೂನೆಯೊಂದಿಗೆ ಪರೀಕ್ಷಾ ದಿನದಂದು ಪರೀಕ್ಷೆಗೆ ಹಾಜರಾಗುವ ಕೇಂದ್ರದಲ್ಲಿ ಕೊಠಡಿ ಮೇಲ್ವಿಚಾರಕರಿಗೆ ಒಪ್ಪಿಸುವುದು. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

★ ಅಭ್ಯರ್ಥಿಗಳು ಮಾಹಿತಿಯನ್ನು ಆನ್‌ಲೈನ್ ಮೂಲಕ ಅರ್ಜಿ ನಮೂನೆಯಲ್ಲಿ ಭರ್ತಿಮಾಡಿರುವಂತೆ ತಮ್ಮ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿಯೂ ಮಾಹಿತಿಯನ್ನು ಭರ್ತಿಮಾಡುವುದು.

- ★ ಪರೀಕ್ಷಾ ಕೊಠಡಿಯಲ್ಲಿ ನಿಶ್ಯಬ್ದತೆ ಮತ್ತು ಪರೀಕ್ಷಾ ಶಿಸ್ತನ್ನು ಕಾಪಾಡಿಕೊಳ್ಳುವುದು.
- ★ ಅಭ್ಯರ್ಥಿಗಳು ತಮ್ಮ ಓ.ಎಂ.ಆರ್. ಉತ್ತರಪತ್ರಿಕೆಯಲ್ಲಿ ಪ್ರಶ್ನೆಪತ್ರಿಕೆ ಪುಸ್ತಿಕೆಯ ಕ್ರಮಸಂಖ್ಯೆಯನ್ನು, ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಪಡೆದುಕೊಂಡಿರುವ ನೋಂದಣಿ ಸಂಖ್ಯೆಯನ್ನು ನಿಗದಿಪಡಿಸಿರುವ ಸ್ಥಳದಲ್ಲಿ ಮಾತ್ರ ನೀಲಿ / ಕಪ್ಪು ಬಾಲ್ ಪಾಯಿಂಟ್ ಪೆನ್ನಿನಿಂದ ಬರೆದು ತುಂಬಬೇಕು. ವಿವರಣಾತ್ಮಕ ಉತ್ತರ ಪತ್ರಿಕೆಗಳ ಮುಖಪುಟದಲ್ಲಿ ಕೇಳಿರುವ ಮಾಹಿತಿಯನ್ನು ಕಡ್ಡಾಯವಾಗಿ ನಮೂದಿಸಬೇಕು.
- ★ ಪರೀಕ್ಷೆಯ ಪ್ರಾರಂಭದಲ್ಲಿಯೇ ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷಗಳೇನಾದರು ಇವೆಯೇ? ಎಂಬುದನ್ನು ಪರೀಕ್ಷಿಸಿ ಖಾತರಿ ಮಾಡಿಕೊಳ್ಳಬೇಕು. ಒಂದು ವೇಳೆ ದೋಷಗಳಿದ್ದರೆ, ದೋಷರಹಿತವಾದ ಮತ್ತೊಂದು ಪ್ರಶ್ನೆಪತ್ರಿಕೆಯನ್ನು ಪಡೆಯುವುದು.
- ★ **ಅಭ್ಯರ್ಥಿ ತನ್ನ ಎಡಗೈ ಹೆಬ್ಬೆರಳಿನ ಗುರುತನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ನಿಗದಿಪಡಿಸಿರುವ ಸ್ಥಳದಲ್ಲಿ ಕಡ್ಡಾಯವಾಗಿ ಹಾಕುವುದು. ಎಡಗೈ ಹೆಬ್ಬೆರಳ ಗುರುತು ರಹಿತ ಉತ್ತರ ಪತ್ರಿಕೆಯನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು. ಎಡಗೈ ಹೆಬ್ಬೆರಳ ಗುರುತು ಸ್ಪಷ್ಟವಾಗಿರಬೇಕು .**
- ★ ಅಭ್ಯರ್ಥಿಗಳು ತಮ್ಮ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಎಚ್ಚರಿಕೆಯಿಂದ ಮತ್ತು ಜಾಗರೂಕತೆಯಿಂದ ಭರ್ತಿ ಮಾಡುವುದು. ಒಮ್ಮೆ ಬರೆದಿರುವುದನ್ನು ಪುನ: ಹೊಡೆದು ಗಲೀಜು ಮಾಡಬಾರದು.
- ★ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಲ್ಲಿ ನೀಡುವ ಪ್ರಶ್ನೆಪತ್ರಿಕೆ ಪುಸ್ತಿಕೆ ಮತ್ತು ಉತ್ತರ ಪತ್ರಿಕೆಗಳಲ್ಲಿ ಮುದ್ರಿತವಾಗಿರುವ ಪರೀಕ್ಷಾ ಸೂಚನೆಗಳನ್ನು ಎಚ್ಚರಿಕೆಯಿಂದ ಓದಿ ಅನುಸರಿಸಬೇಕು.
- ★ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಉಪಯೋಗಿಸುವಾಗ ಬಹಳ ಎಚ್ಚರವಹಿಸಬೇಕು ಅದನ್ನು ಮಡಚುವುದಾಗಲೀ, ಹರಿಯುವುದಾಗಲೀ,ಮುದುರುವುದಾಗಲೀ ಮಾಡಬಾರದು. ಉತ್ತರಪತ್ರಿಕೆಯ ಜೊತೆಯಲ್ಲಿ ಯಾವುದೇ ವರ್ಕ್‌ಷೀಟನ್ನು ಕಟ್ಟಬಾರದು.
- ★ ಪರೀಕ್ಷಾ ಕೊಠಡಿಯೊಳಕ್ಕೆ ಉತ್ತರಿಸಲು ಬೇಕಾದ ನೀಲಿ ಅಥವಾ ಕಪ್ಪು ಶಾಯಿಯ ಬಾಲ್‌ಪಾಯಿಂಟ್ ಪೆನ್ನನ್ನು ಮಾತ್ರ ಪ್ರವೇಶ ಪತ್ರದೊಂದಿಗೆ ತೆಗೆದುಕೊಂಡು ಹೋಗಬೇಕು.
- ★ ಎಲೆಕ್ಟ್ರಾನಿಕ್ಸ್ ವಸ್ತುಗಳಾದ ಕ್ಯಾಲ್‌ಕ್ಯುಲೇಟರ್, ಲಾಗ್‌ಟೇಬಲ್, ಸೆಲ್ಯೂಲಾರ್ ದೂರವಾಣಿ, ಪೇಜರ್ ಮುಂತಾದ ಸಂಪರ್ಕ ವಸ್ತುಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ನಿಷೇಧಿಸಲಾಗಿದೆ.
- ★ ಪರೀಕ್ಷೆ ಪ್ರಾರಂಭವಾಗುವ 30 ನಿಮಿಷಗಳ ಮೊದಲು ಅಭ್ಯರ್ಥಿಗಳಿಗೆ ಪರೀಕ್ಷಾ ಕೊಠಡಿಗೆ ಪ್ರವೇಶವನ್ನು ನೀಡಲಾಗುವುದು.
- ★ ಪರೀಕ್ಷೆ ಪ್ರಾರಂಭವಾದ 15 ನಿಮಿಷಗಳ ನಂತರ ಯಾವುದೇ ಕಾರಣಗಳಿಂದ ತಡವಾಗಿ ಬಂದ ಅಭ್ಯರ್ಥಿಯನ್ನು ಪರೀಕ್ಷಾ ಕೊಠಡಿಯೊಳಗೆ ಪ್ರವೇಶಿಸಲು ಅನುಮತಿ ನೀಡುವುದಿಲ್ಲ.
- ★ ಪತ್ರಿಕೆಗೆ ನಿಗದಿ ಪಡಿಸಿರುವ ಅವಧಿ ಮುಗಿದ ನಂತರ ಯಾವುದೇ ಅಭ್ಯರ್ಥಿಯು ಉತ್ತರವನ್ನು ಮರು ಪರಿಶೀಲನೆ ಮಾಡುವುದನ್ನು ನಿಷೇಧಿಸಲಾಗಿದೆ.
- ★ ಎಲ್ಲಾ ಅಭ್ಯರ್ಥಿಗಳು ಪರೀಕ್ಷೆಗೆ ನಿಗದಿಪಡಿಸಿರುವ ವೇಳೆ ಮುಗಿದ ಕೂಡಲೇ, ಉತ್ತರಪತ್ರಿಕೆಯನ್ನು ಮೇಲ್ವಿಚಾರಕರಿಗೆ ಒಪ್ಪಿಸಿದ ನಂತರವೇ ಪರೀಕ್ಷಾ ಕೊಠಡಿಯಿಂದ ನಿರ್ಗಮಿಸಬೇಕು.
- ★ ಯಾವುದೇ ಅಭ್ಯರ್ಥಿಯು ಬೇರೆ ಅಭ್ಯರ್ಥಿಯ ಅಥವಾ ತನ್ನದೇ ಉತ್ತರ ಪತ್ರಿಕೆಯ ನಕಲು ಮಾಡುವುದು ಅಥವಾ ಬೇರೆಯವರಿಗೆ ಕೊಡಲು ಪ್ರಯತ್ನಿಸುವುದು, ತೆಗೆದುಕೊಳ್ಳಲು ಪ್ರಯತ್ನಿಸುವುದು, ಅನಧಿಕೃತ ಸಹಾಯವನ್ನು ಪಡೆಯಲು ಯತ್ನಿಸುವುದು, ಇವುಗಳನ್ನು ಪರೀಕ್ಷಾ ಕೊಠಡಿಯಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ.
- ★ ಅಭ್ಯರ್ಥಿಯು ಪರೀಕ್ಷಾ ಕಾರ್ಯದಲ್ಲಿರುವ ಸಿಬ್ಬಂದಿಯೊಂದಿಗೆ ಮಾತ್ರ ಶೌಚಾಲಯಕ್ಕೆ ಹೋಗಬೇಕು. ಹೋಗುವ ಸಮಯದಲ್ಲಿ ಯಾವುದೇ ಕಾರಣಕ್ಕೂ ತನ್ನೊಂದಿಗೆ ಪರೀಕ್ಷೆಯ ಯಾವುದೇ ಸಾಮಗ್ರಿಗಳನ್ನು ಶೌಚಾಲಯಕ್ಕೆ

ಒಯ್ಯುವಂತಿಲ್ಲ. ಶೌಚಾಲಯಕ್ಕೆ ಹೋಗುವ ಮುನ್ನ ತನ್ನ ಉತ್ತರ ಪತ್ರಿಕೆ ಮತ್ತು ಇತರೆ ಹಾಳೆಗಳನ್ನು ಬೋರಲಾಗಿ ತನ್ನ ಸ್ಥಳದಲ್ಲಿಟ್ಟು ಹೋಗಬೇಕು. ಯಾವುದೇ ಅಭ್ಯರ್ಥಿಯು ಪರೀಕ್ಷಾ ಅವಧಿಯ ಕಡೇ 30 ನಿಮಿಷಗಳಲ್ಲಿ ಶೌಚಾಲಯಕ್ಕೆ ಹೋಗಲು ಅನುಮತಿಸುವುದಿಲ್ಲ.

★ ಧೂಮಪಾನ, ಚಹಾಪಾನ ಇವುಗಳನ್ನು ಪರೀಕ್ಷಾ ಕೊಠಡಿಯಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ. ಬೆಂಕಿಪೊಟ್ಟಣ ಅಥವಾ ಸಿಗರೇಟ್ ಲೈಟರ್ ಇವುಗಳನ್ನು ಪರೀಕ್ಷಾ ಕೊಠಡಿಯೊಳಗೆ ಒಯ್ಯುವುದನ್ನು ನಿಷೇಧಿಸಲಾಗಿದೆ.

★ ಪ್ರತಿ ಅಭ್ಯರ್ಥಿಯು ಮುಖ್ಯ ಅಧೀಕ್ಷಕರು ಅಥವಾ ಕೊಠಡಿ ಮೇಲ್ವಿಚಾರಕರು ನೀಡಿದ ಸೂಚನೆಗಳಿಗೆ/ ನಿಯಮಗಳಿಗೆ ಬದ್ಧರಾಗಿರಬೇಕು. ಕೊಠಡಿ ಮೇಲ್ವಿಚಾರಕರು ಅಥವಾ ಮುಖ್ಯ ಅಧೀಕ್ಷಕರು ಅಭ್ಯರ್ಥಿಗಳ ಬಗ್ಗೆ ಏನಾದರೂ ಹೆಚ್ಚಿನ ಮಾಹಿತಿ ಪಡೆಯಬಯಸಿದಲ್ಲಿ ಅಭ್ಯರ್ಥಿಗಳು ಆ ಮಾಹಿತಿಯನ್ನು ನೀಡಲು ಸಿದ್ಧರಿರಬೇಕು.

★ ಅಭ್ಯರ್ಥಿಯು ಪರೀಕ್ಷಾ ಸೂಚನೆ / ನಿಯಮಗಳನ್ನು ಪಾಲಿಸುವಲ್ಲಿ ವಿಫಲರಾದರೆ ಅಥವಾ ನಿಯಮಗಳನ್ನು ಉಲ್ಲಂಘಿಸಿದ ಪಕ್ಷದಲ್ಲಿ ಅವರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು.

***05] ವಿವಿಧ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಬಗ್ಗೆ:***

ಎಲ್ಲಾ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಒಂದೇ ಅರ್ಜಿ ನಮೂನೆಯನ್ನು ನಿಗದಿಪಡಿಸಿದೆ.ಅಭ್ಯರ್ಥಿಗಳು ಅರ್ಹರಿದ್ದಲ್ಲಿ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ವಿಷಯದ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರತ್ಯೇಕ ಅರ್ಜಿಗಳ ಅವಶ್ಯಕತೆ ಇರುವುದಿಲ್ಲ. ಆದರೆ, ಹುದ್ದೆಗಳಿಗೆ ತಮ್ಮ ಆದ್ಯತೆಯನ್ನು ನಮೂದಿಸಬೇಕು. ಪೇಪರ್–2 ರ ಪ್ರಶ್ನೆಪತ್ರಿಕೆಗೆ ಉತ್ತರವನ್ನು ಅಭ್ಯರ್ಥಿಯು ಆಯ್ಕೆ ಬಯಸುವ ವಿಷಯದ ಮಾಧ್ಯಮದಲ್ಲಿ ಅಥವ ಇಂಗ್ಲಿಷ್ ಭಾಷೆಯಲ್ಲಿ ಉತ್ತರಿಸಬಹುದಾಗಿದ್ದು ಸದರಿ ಪತ್ರಿಕೆ–2 ನ್ನು ಯಾವ ಮಾಧ್ಯಮದಲ್ಲಿ ಉತ್ತರಿಸಲಾಗುವುದು ಎಂಬುದನ್ನು ಅರ್ಜಿಯಲ್ಲಿ ನಮೂದಿಸಬೇಕು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 6–8ನೇ ತರಗತಿಗಳಿಗೆ ಬೋಧಿಸಲು ಅರ್ಜಿ ಸಲ್ಲಿಸುವ ಅಭ್ಯರ್ಥಿಯು, ಪೇಪರ್–2 ಪತ್ರಿಕೆಯನ್ನು, ಯಾವ ಬೋಧನಾ ಮಾಧ್ಯಮದ ಹುದ್ದೆಗೆ ಆಯ್ಕೆ ಬಯಸುತ್ತಾರೋ, ಆ ಭಾಷಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ ಉತ್ತರಿಸಬೇಕು.

ಪದವೀಧರ ಪ್ರಾಥಮಿಕ ಶಿಕ್ಷಕ ವೃಂದದ ವಿಷಯಗಳ ಹಾಗೂ ವಿವಿಧ ಮಾಧ್ಯಮದ ಹುದ್ದೆಗಳ ಸಂಖ್ಯೆ ಮತ್ತು ಮೀಸಲಾತಿ ವರ್ಗೀಕರಣದ ವಿವರಗಳನ್ನು ಈ ಅಧಿಸೂಚನೆಗೆ ಲಗತ್ತಿಸಿರುವ ***ಅನುಬಂಧ–1 ರಲ್ಲಿ*** ಪ್ರತ್ಯೇಕವಾಗಿ ನೀಡಲಾಗಿದೆ.

ಟಿಪ್ಪಣಿ: ಮೇಲ್ಕಂಡ ಎಲ್ಲಾ ಹುದ್ದೆಗಳು ಸರ್ಕಾರಿ ಆದೇಶ ಸಂ : ಸಿಆಸುಇ 43 ಹೆಚ್‌ಕೆಸಿ 2013 ದಿನಾಂಕ: 29.01.2014 ಪ್ರಕಾರ ಹೈದರಾಬಾದ್ ಕರ್ನಾಟಕ ಪ್ರದೇಶದ (ಸ್ಥಳೀಯ) ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಾಗಿವೆ.

***07] ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8 ನೇ ತರಗತಿ)*** ಹುದ್ದೆಗಳಿಗೆ ಸಂಬಂಧಿಸಿದಂತೆ

***ವೇತನ ಶ್ರೇಣಿ :– ರೂ. 14550 – 26700***

(ರೂ. 14550–350–15600–400–17200–450–19000–500–21000–600–24600–700–26700)

**08]** ***ಶೈಕ್ಷಣಿಕ ವಿದ್ಯಾರ್ಹತೆ :–***

ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಉಲ್ಲೇಖ(2)ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಗೊಳಿಸಲಾಗಿರುವ ವಿದ್ಯಾರ್ಹತೆ ಹೊಂದಿರಬೇಕು.

ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8) ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಅರ್ಹತೆಗಳು :

1. ಪದವಿಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ಪ್ರಾಥಮಿಕ ಶಿಕ್ಷಣದಲ್ಲಿ ಎರಡು ವರ್ಷಗಳ ಡಿಪ್ಲೋಮ ಉತ್ತೀರ್ಣರಾಗಿರಬೇಕು

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ಬಿ.ಇಡಿ ಪದವಿ ಅಥವಾ ವಿಶೇಷ ಶಿಕ್ಷಣ (ಸ್ಪೆಷಲ್ ಎಜುಕೇಶನ್) ಪದವಿ ಪಡೆದಿರಬೇಕು.

**ಅಥವಾ**

ಪಿ.ಯು.ಸಿ.ಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ನಾಲ್ಕು ವರ್ಷದ ಬ್ಯಾಚುಲರ್ ಆಫ್ ಎಲಿಮೆಂಟರಿ ಎಜುಕೇಷನ್‌ನಲ್ಲಿ ಪದವಿ ಅಥವಾ ನಾಲ್ಕು ವರ್ಷಗಳ ಬ್ಯಾಚುಲರ್ ಆಫ್ ಎಜುಕೇಷನ್‌ನಲ್ಲಿ ಉತ್ತೀರ್ಣರಾಗಿರಬೇಕು.

ಪರಂತು ಪರಿಶಿಷ್ಟಜಾತಿ/ ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1 / ವಿಕಲಚೇತನರು ಕನಿಷ್ಟ ಶೇಕಡ 45 ಅಂಕಗಳನ್ನು ಪದವಿ ಅಥವಾ ಪಿ.ಯು.ಸಿ.ಯಲ್ಲಿ ಪಡೆದಿರಬೇಕು.

**ಮತ್ತು**

2. ಕಾಲ ಕಾಲಕ್ಕೆ ಎನ್.ಸಿ.ಟಿ.ಇ.ಯು ನಿಗದಿಪಡಿಸಿದ ಯಾವುದಾದರೂ ಉನ್ನತ ಅಥವಾ ಹೆಚ್ಚುವರಿ ವಿದ್ಯಾರ್ಹತೆಯನ್ನು ಹೊಂದಿರಬೇಕು.

**ಮತ್ತು**

3. ಮೇಲ್ಕಾಣಿಸಿದ ವಿದ್ಯಾರ್ಹತೆಯೊಂದಿಗೆ ಅಭ್ಯರ್ಥಿಗಳು ಕರ್ನಾಟಕ ಅಥವಾ ಭಾರತ ಸರ್ಕಾರ ನಡೆಸುವ ಶಿಕ್ಷಕರ ಅರ್ಹತಾ ಪರೀಕ್ಷೆಯ ಪೇಪರ್–2 ರಲ್ಲಿ ಅರ್ಹತೆ ಗಳಿಸಿರಬೇಕು.

**ಟಿಪ್ಪಣಿ** : ಮೇಲ್ಕಾಣಿಸಿದ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ:

i. ನಾಲ್ಕು ವರ್ಷಗಳ ಸಂಯುಕ್ತ ಶಿಕ್ಷಕರ ಶಿಕ್ಷಣ ಪದವಿಯನ್ನು ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಐಚ್ಚಿಕ ವಿಷಯಗಳನ್ನು 3 ವರ್ಷವೂ ಕಡ್ಡಾಯವಾಗಿ ಅಧ್ಯಯನ ಮಾಡಿರಬೇಕೆಂಬ ಷರತ್ತು ಅನ್ವಯಿಸುವುದಿಲ್ಲ.

ii. "ಪ್ರಾಥಮಿಕ ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಪದವಿ ಕೋರ್ಸ್" ಅಥವಾ "ಬಿ. ಇಡಿ ಕೋರ್ಸ್" ಪಡೆದಿದ್ದಲ್ಲಿ ಎನ್.ಸಿ.ಟಿ.ಇಯಿಂದ ಮಾನ್ಯತೆ ಪಡೆದಿರಬೇಕು.

iii. ವಿಶೇಷ ಶಿಕ್ಷಣ (ಸ್ಪೆಷಲ್ ಎಜುಕೇಶನ್) ಪದವಿ ಪಡೆದಿದ್ದಲ್ಲಿ ರಿಹ್ಯಾಬಿಲಿಟೇಶನ್ ಕೌನ್ಸಿಲ್ ಆಫ್ ಇಂಡಿಯಾದಿಂದ ಮಾನ್ಯತೆ ಪಡೆದಿರಬೇಕು.

4. **ವಿದ್ಯಾರ್ಹತೆ : ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ವಿದ್ಯಾರ್ಹತೆ ವಿವರಗಳು ಕೆಳಗಿನಂತೆ ಇರುತ್ತವೆ.**

I. **ಪದವೀಧರ ಪ್ರಾಥಮಿಕ ಶಿಕ್ಷಕ [ಭಾಷೆ – ಆಂಗ್ಲ] :**

**ಪದವೀಧರ ಪ್ರಾಥಮಿಕ ಶಿಕ್ಷಕ (ಭಾಷೆ– ಆಂಗ್ಲ) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು:**

(1) ಪದವಿಯಲ್ಲಿ ಆಂಗ್ಲ ಭಾಷೆಯನ್ನು ಐಚ್ಛಿಕ ವಿಷಯವಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು **ಮತ್ತು** ಕನ್ನಡ, ಹಿಂದಿ, ಮರಾಠಿ, ಉರ್ದು, ತೆಲುಗು, ತಮಿಳು, ಕೊಂಕಣಿ, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಭೂಗೋಳಶಾಸ್ತ್ರ ಈ ಯಾವುದಾದರೂ ವಿಷಯಗಳ ಪೈಕಿ ಒಂದು ವಿಷಯವನ್ನು ಮೂರು ವರ್ಷವೂ ಐಚ್ಛಿಕ ವಿಷಯವಾಗಿ ಅಧ್ಯಯನ ಮಾಡಿರಬೇಕು.

(2) ಐಚ್ಛಿಕ ಆಂಗ್ಲಭಾಷೆಯಲ್ಲಿ ಕನಿಷ್ಟ ಶೇಕಡ 50ರಷ್ಟು ಅಂಕಗಳನ್ನು ಮತ್ತು ಮೇಲ್ಕಾಣಿಸಿದ ಇತರೆ ವಿಷಯಗಳ ಪೈಕಿ ಒಂದು ವಿಷಯದಲ್ಲಿ ಕನಿಷ್ಟ ಶೇಕಡ 50ರಷ್ಟು ಅಂಕಗಳನ್ನು ಗಳಿಸಿರಬೇಕು.

ಪರಂತು ಪರಿಶಿಷ್ಟಜಾತಿ /ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1 / ವಿಕಲಚೇತನರಿಗೆ, ನಿಗದಿಪಡಿಸಿರುವ ಎರಡು ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು.

(3) ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಆಂಗ್ಲಭಾಷೆಯನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

***II.*** **ಪದವೀಧರ ಪ್ರಾಥಮಿಕ ಶಿಕ್ಷಕ [ಗಣಿತ ಮತ್ತು ವಿಜ್ಞಾನ]** :

**ಪದವೀಧರ ಪ್ರಾಥಮಿಕ ಶಿಕ್ಷಕ (ಗಣಿತ ಮತ್ತು ವಿಜ್ಞಾನ) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ**

**ಅಭ್ಯರ್ಥಿಗಳು:**

ಪದವಿಯಲ್ಲಿ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯಗಳನ್ನು ಐಚ್ಛಿಕ ವಿಷಯಗಳಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು. ಹಾಗು ಪ್ರತಿ ವಿಷಯದಲ್ಲಿಯೂ ಕನಿಷ್ಟ ಶೇ. 50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟಜಾತಿ/ ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ ವಿಕಲಚೇತನರಿಗೆ, ನಿಗದಿಪಡಿಸಿರುವ ಮೂರೂ ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು.

ಶಿಕ್ಷಣದಲ್ಲಿ, ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯಗಳ ಪೈಕಿ ಯಾವುದಾದರೊಂದು ವಿಷಯವನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

**ಪದವೀಧರ ಪ್ರಾಥಮಿಕ ಶಿಕ್ಷಕ [ಸಮಾಜ ಪಾಠಗಳು]** :

**ಪದವೀಧರ ಪ್ರಾಥಮಿಕ ಶಿಕ್ಷಕ (ಸಮಾಜ ಪಾಠಗಳು) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ**

**ಅಭ್ಯರ್ಥಿಗಳು:**

(1) ಪದವಿಯಲ್ಲಿ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ ರಾಜ್ಯಶಾಸ್ತ್ರ ವಿಷಯಗಳ ಪೈಕಿ ಎರಡು ವಿಷಯಗಳನ್ನು ಐಚ್ಛಿಕ ವಿಷಯಗಳಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು. ಸದರಿ ಎರಡು ವಿಷಯಗಳಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

**ಅಥವಾ**

(2) ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ ರಾಜ್ಯಶಾಸ್ತ್ರ ವಿಷಯಗಳ ಪೈಕಿ ಒಂದು ವಿಷಯದಲ್ಲಿ ಮೂರು ವರ್ಷವೂ ಅಧ್ಯಯನ ಮಾಡಿರುವುದರೊಂದಿಗೆ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು ಮತ್ತು ಕನ್ನಡ/ ಇಂಗ್ಲಿಷ್/ ಹಿಂದಿ/ಮರಾಠಿ/ ಉರ್ದು/ ತೆಲುಗು/ ತಮಿಳು/ ಕೊಂಕಣಿ ಭಾಷೆಗಳ ಪೈಕಿ ಒಂದು ಭಾಷೆಯನ್ನು ಐಚ್ಛಿಕವಾಗಿ ಮೂರು ವರ್ಷವೂ ಅಧ್ಯಯನ ಮಾಡಿ ಸದರಿ ಭಾಷಾ ವಿಷಯದಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟಜಾತಿ/ಪರಿಶಿಷ್ಟ ವರ್ಗ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ ವಿಕಲಚೇತನರಿಗೆ ನಿಗದಿಪಡಿಸಿರುವ ಎರಡು ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು.

(3) ಶಿಕ್ಷಣದಲ್ಲಿ, ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ ರಾಜ್ಯಶಾಸ್ತ್ರ ವಿಷಯಗಳ ಪೈಕಿ ಒಂದು ವಿಷಯವನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

**ಸ್ತಾಮಾನ್ಯ ಸೂಚನೆಗಳು:–**
(1)

1) 6 ರಿಂದ 7/8 ನೇ ತರಗತಿಗಳ ಶಾಲೆಗಳಿಗೆ ನೇಮಕವಾಗುವ ಪದವೀಧರ ಪ್ರಾಥಮಿಕ ಶಿಕ್ಷಕರು ಕಾರ್ಯಭಾರದ ಹೊಂದಾಣಿಕೆಗೆ ಅದೇ ಶಾಲೆಯ ಅಥವಾ ಹತ್ತಿರದ ಶಾಲೆಯ ತರಗತಿಗಳಿಗೆ ಅವರು ನೇಮಕಾತಿ ಹೊಂದಿರುವ ವಿಷಯದ ಜೊತೆಗೆ ಯಾವುದೇ ಇತರೆ ವಿಷಯಗಳ ಬೋಧನೆ ಮಾಡಲು ಸೂಚಿಸಬಹುದು.
2) ಆಂಗ್ಲ ಮತ್ತು ಸಮಾಜ ಪಾಠಗಳು ವಿಷಯಗಳ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ಆಯ್ಕೆಯಾದಲ್ಲಿ ಪ್ರಥಮ ಆಧ್ಯತೆ ನೀಡಿದ ಹುದ್ದೆಗೆ ಮಾತ್ರ ಪರಿಗಣಿಸಲಾಗುವುದು.
3) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ. ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ವಿದ್ಯಾರ್ಹತೆಯ ಅಂಕಪಟ್ಟಿ ಹಾಗೂ ಇತರೆ ಸರ್ಟಿಫಿಕೇಟ್‌ಗಳನ್ನು ಪಡೆದಿರಬೇಕು.

***09] ವಯೋಮಿತಿ:***

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು

***[ಅ]*** ಕನಿಷ್ಠ 21 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

***[ಆ]*** ಗರಿಷ್ಠ ವಯೋಮಿತಿ:

| | |
|---|---|
| ಸಾಮಾನ್ಯ ವರ್ಗ | 40 ವರ್ಷ |
| 2ಎ, 2ಬಿ, 3ಎ, 3ಬಿ | 43 ವರ್ಷ |
| ಪ.ಜಾ / ಪ.ಪಂ / ಪ್ರವರ್ಗ–1 / ವಿಕಲಚೇತನ ಅಭ್ಯರ್ಥಿಗಳಿಗೆ | 45 ವರ್ಷ |

***10] ಮೆರಿಟ್ ನಿರ್ಧರಿಸುವ ವಿಧಾನ:***

***6–8 ನೇ ತರಗತಿ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ***

ಆಯ್ಕೆ ಪ್ರಾಧಿಕಾರವು ನೇಮಕಾತಿಗೆ ವಿಷಯವಾರು ಮತ್ತು ಮಾಧ್ಯಮವಾರು ಹಾಗೂ ಪ್ರವರ್ಗವಾರು ಅಧಿಸೂಚಿಸಿದ ಹುದ್ದೆಗಳಿಗೆ ಅನುಸಾರವಾಗಿ ಸ್ಪರ್ಧಾತ್ಮಕ ಪರೀಕ್ಷೆ, ಟಿ.ಇ.ಟಿ ಪರೀಕ್ಷೆ, ಪದವಿ ಶಿಕ್ಷಣ ಮತ್ತು ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಶೇಕಡವಾರು ಅಂಕಗಳನ್ನು ಆಧರಿಸಿ ಈ ಕೆಳಗೆ ವಿವರಿಸಿದಂತೆ ವೆಯಿಟೇಜ್(weightage) ಉಪಯೋಗಿಸಿ derived percentage ಲೆಕ್ಕಹಾಕಿ ಅದರ ಆಧಾರದ ಮೇಲೆ ಪ್ರತ್ಯೇಕವಾಗಿ ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.

ಅ) Derived percentage ಲೆಕ್ಕಹಾಕಲು ಅಭ್ಯರ್ಥಿಯು ಡಿಪ್ಲೊಮ ಇನ್ ಎಲಿಮೆಂಟರಿ ಎಜುಕೇಶನ್ ಅಥವಾ ಬಿ.ಇಡಿ ಅಥವಾ ಡಿಪ್ಲೊಮ ಇನ್ ಸ್ಪೆಷಲ್ ಎಜುಕೇಶನ್ ಅಥವಾ ಬಿ.ಇಡಿ (ಸ್ಪೆಷಲ್ ಎಜುಕೇಶನ್) ವಿದ್ಯಾರ್ಹತೆ ಹೊಂದಿದ್ದಲ್ಲಿ ಕೆಳಗಿನಂತೆ ವೆಯಿಟೇಜ್(weightage)ನ್ನು ಪರಿಗಣಿಸಲಾಗುವುದು.

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.35 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.15 |
| 3 | ಪದವಿಯಲ್ಲಿ ಪಡೆದ ಅಂಕಗಳ | 0.25 |
| 4 | ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಅಂಕಗಳ | 0.25 |

ಆ) Derived percentage ಲೆಕ್ಕಹಾಕಲು ಅಭ್ಯರ್ಥಿಯು ನಾಲ್ಕು ವರ್ಷಗಳ ಶಿಕ್ಷಕರ ಶಿಕ್ಷಣ ಪದವಿಯನ್ನು ಹೊಂದಿದ್ದಲ್ಲಿ ವೆಯಿಟೇಜ್‌ನ್ನು ಈ ಮುಂದಿನಂತೆ ಪರಿಗಣಿಸಲಾಗುವುದು

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.35 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.15 |
| 3 | ನಾಲ್ಕು ವರ್ಷಗಳ ಬಿ.ಎಲ್.ಇಡಿ, ಅಥವಾ ಬಿಎ/ಬಿಎಸ್ಸಿಇಡಿ ಅಥವಾ ಬಿಎಇಡಿ ಅಥವಾ ಬಿಎಸ್ಸಿಇಡಿ. ಪದವಿಯಲ್ಲಿ ಪಡೆದ ಅಂಕಗಳ | 0.50 |

ಮೇಲೆ ಹೇಳಿದ ಪ್ರಕಾರ ವೆಯಿಟೇಜ್‌ನ್ನು ಲೆಕ್ಕ ಹಾಕಿದಾಗ ಮೆರಿಟ್ ಪಟ್ಟಿಯಲ್ಲಿ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ derived percentage ಅಂಕಗಳನ್ನು ಪಡೆದಲ್ಲಿ ವಯಸ್ಸನ್ನು ಆಧರಿಸಿ ವಯಸ್ಸಿನಲ್ಲಿ ಹಿರಿಯರಾದವರನ್ನು ಮೆರಿಟ್ ಪಟ್ಟಿಯಲ್ಲಿ ವಯಸ್ಸಿನಲ್ಲಿ ಕಿರಿಯರಿಗಿಂತ ಮೊದಲು ಪರಿಗಣಿಸಲಾಗುವುದು.

*11]* **ಹುದ್ದೆಗಳ ಮೀಸಲಾತಿ** :

**(1)** ಹುದ್ದೆಗಳ ಮೀಸಲಾತಿಯು ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರೆಕ್ರೊಟ್‌ಮೆಂಟ್] ರೂಲ್ಸ್

1977ರ ನಿಯಮ-9ರಲ್ಲಿನ ಪ್ರಮಾಣಾನುಸಾರ ಮತ್ತು ಕಾಲಕಾಲಕ್ಕೆ ಹೊರಡಿಸಲಾಗುವ ಕಾನೂನುಗಳು, ನಿಯಮಗಳು ಹಾಗೂ ಕೆಳಕಂಡ ಜಾರಿಯಲ್ಲಿರುವ ಸರ್ಕಾರದ ಆದೇಶಗಳನ್ನೂ ಒಳಗೊಂಡಂತೆ ಇರುತ್ತವೆ.

i. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳ ವ್ಯಕ್ತಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳು
ii. ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ 2000
iii. ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977 ನಿಯಮ-9ರ ಪ್ರಕಾರ ವಿಕಲಚೇತನರು ಹಾಗೂ ಮಾಜಿ ಸೈನಿಕರು, ನಿಗದಿಪಡಿಸಿದ ಪ್ರಮಾಣದಲ್ಲಿ
iv. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 23 ಎಸ್ಆರ್ಆರ್ 1999, ದಿನಾಂಕ: 23.11.2000ರನ್ವಯ ಯೋಜನಾ ನಿರಾಶ್ರಿತ ಅಭ್ಯರ್ಥಿಗಳಿಗೆ, ನಿಗದಿಪಡಿಸಿದ ಪ್ರಮಾಣದಲ್ಲಿ
v. ಎಲ್ಲಾ ಪ್ರವರ್ಗಗಳಲ್ಲಿ ಶೇಕಡ 50ಕ್ಕಿಂತ ಕಡಿಮೆಯಿಲ್ಲದಂತೆ ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**<u>ಲಗತ್ತುಗಳು</u> :**

1. ಎಸ್.ಎಸ್.ಎಲ್.ಸಿ. ಅಂಕಪಟ್ಟಿ (ಒಂದಕ್ಕಿಂತ ಹೆಚ್ಚಿನ ಪ್ರಯತ್ನಗಳಲ್ಲಿ ಉತ್ತೀರ್ಣರಾದವರು ಜನ್ಮ ದಿನಾಂಕ ಹೊಂದಿರುವ ಕ್ರೋಢೀಕೃತ ಅಂಕಪಟ್ಟಿ)
2. ಪಿ.ಯು.ಸಿ ಅಂಕಪಟ್ಟಿ (ಪಿ.ಯು.ಸಿ.ಯಲ್ಲಿ ಅಧ್ಯಯನ ಮಾಡಿದ ಮಾಧ್ಯಮದ ಪ್ರಮಾಣ ಪತ್ರ)

**<u>ಮೀಸಲಾತಿ ಪ್ರಮಾಣ ಪತ್ರಗಳು:</u>**

1. ಮೀಸಲಾತಿ ಕೋರಿರುವ ಪ್ರವರ್ಗದ ಪ್ರಮಾಣ ಪತ್ರ.
2. ಹೈದರಾಬಾದ್ ಕರ್ನಾಟಕ ವಿಭಾಗದ ವಾಸಸ್ಥಳದ (371 ಜೆ) ಪ್ರಮಾಣ ಪತ್ರವನ್ನು ಸಹಾಯಕ ಆಯುಕ್ತರಿಂದ ಪಡೆದಿರಬೇಕು.
3. ಮಾಜಿ ಸೈನಿಕರಾಗಿ ಕಾರ್ಯನಿರ್ವಹಿಸಿರುವ/ಅವಲಂಬಿತರ ಪ್ರಮಾಣ ಪತ್ರ.
4. ಗ್ರಾಮೀಣ ಅಭ್ಯರ್ಥಿ ವ್ಯಾಸಂಗ ಹಾಗೂ ಸಿಂಧುತ್ವದ(ಮಾದರಿಯನ್ನು ಅನುಬಂಧದಲ್ಲಿ ನೀಡಿದೆ) ಪ್ರಮಾಣ ಪತ್ರಗಳು (ದಿ. 10-08-2005 ರ ಸರಕಾರದ ಆದೇಶದಲ್ಲಿ ನಿಗದಿಪಡಿಸಿರುವ ನಮೂನೆ 1 ಮತ್ತು 2 ರಲ್ಲಿ)
5. ಅಂಗವಿಕಲ ಅಭ್ಯರ್ಥಿ ಪ್ರಮಾಣ ಪತ್ರ..
6. ಕನ್ನಡ ಮಾಧ್ಯಮ ವ್ಯಾಸಂಗಮಾಡಿದ ಅಭ್ಯರ್ಥಿ ಪ್ರಮಾಣ ಪತ್ರ.
7. ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿ ಪ್ರಮಾಣ ಪತ್ರ
8. **ಡಿ.ಇಡಿ/ಡಿ.ಎಲ್.ಇಡಿ/ಟಿ.ಸಿ.ಹೆಚ್/ಟಿ.ಇ.ಟಿ ಹಾಗೂ ಇತರೆ ಆಯಾ ಹುದ್ದೆಗೆ ಅರ್ಹತೆಯನ್ನು ದೃಢೀಕರಿಸುವ ಪ್ರಮಾಣ ಪತ್ರಗಳು.**
9. **ಪದವಿಯ ಮೂರೂ ವರ್ಷಗಳ ಎಲ್ಲಾ ಪ್ರಯತ್ನಗಳ ದೃಢೀಕೃತ ಅಂಕಪಟ್ಟಿಗಳು ಹಾಗೂ ತೇರ್ಗಡೆಹೊಂದಿದ ಪ್ರಮಾಣ ಪತ್ರ.**
10. **ಬಿ.ಎಡ್. ಅಂಕಪಟ್ಟಿ ಮತ್ತು ತೇರ್ಗಡೆಹೊಂದಿದ ಪ್ರಮಾಣ ಪತ್ರಗಳು.**
11. **ಹಾಲಿ ಕಾರ್ಯ ನಿರ್ವಹಿಸುತ್ತಿರುವ ಉದ್ಯೋಗಕ್ಕೆ ಸಂಬಂಧಿಸಿದ ಸೇವಾ ಪ್ರಮಾಣ ಪತ್ರ ಹಾಗೂ ಈ ಹುದ್ದೆಗೆ ಅರ್ಜಿ ಸಲ್ಲಿಸಲು ನೇಮಕಾತಿ ಪ್ರಾಧಿಕಾರದಿಂದ ಪಡೆದುಕೊಂಡಿರುವ ಅನುಮತಿ ಪತ್ರ .**
12. **ಇನ್ನಿತರೆ ಅವಶ್ಯವೆಂದು ಭಾವಿಸಿದ ದಾಖಲೆಗಳ ಪ್ರತಿಗಳು.**

## ನಮೂನೆ –ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ

**ನಮೂನೆ**

## ಪ್ರಮಾಣ ಪತ್ರ

-------------- ರಾಜ್ಯದ /ಕೇಂದ್ರಾಡಳಿತ ಪ್ರದೇಶದ --------------------- ಜಿಲ್ಲೆಯ /ವಿಭಾಗದ ------ ಗ್ರಾಮ /ಪಟ್ಟಣದ ನಿವಾಸಿಯಾದ ಶ್ರೀ/ಶ್ರೀಮತಿ : -------------------ಎಂಬುವವರ ಮಗ/ಮಗಳಾದ ಶ್ರೀ/ಶ್ರೀಮತಿ ------- ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ತಿದ್ದುಪಡಿ) ಆದೇಶ 1956, ಮುಂಬೈ ರಾಜ್ಯ ಪುನರ್ರಚನಾ ಅಧಿನಿಯಮ , 1960 ಪಂಜಾಬ್ ರಾಜ್ಯ ಪುನರ್ರಚನಾ ಅಧಿನಿಯಮ, 1966 ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ ಪುನರ್ರಚನಾ ಅಧಿನಿಯಮ, 1971 ರ ಮೂಲಕ ತಿದ್ದುಪಡಿಯಾದಂತೆ)

- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ 1976 ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ) ಅನುಸೂಚಿತ ಬುಡಕಟ್ಟುಗಳ ಆದೇಶ, 1959
- ಸಂವಿಧಾನ (ದಾದರ್ ಮತ್ತು ನಗರ್ ಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ ) ಅನುಸೂಚಿತ ಜಾತಿಗಳ ಆದೇಶ 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * -------------------------ಮತ್ತು ಅಥವಾ ಅವನ /ಅವಳ ಕುಟುಂಬವು ------ರಾಜ್ಯ / ಕೇಂದ್ರಾಡಳಿತ ಪ್ರದೇಶದ ---------------- ಜಿಲ್ಲಾ/ವಿಭಾಗದ ---------------- ಗ್ರಾಮ/ ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ.................................

ತಹಶೀಲ್ದಾರ್ .......................

ಸ್ಥಳ

ಪದನಾಮ: ಕಛೇರಿ ಮೊಹರಿನೊಂದಿಗೆ

ದಿನಾಂಕ:

**ರಾಜ್ಯ / ಕೇಂದ್ರಾಡಳಿತ ಪ್ರದೇಶ ***

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ/ಹೊಡೆದು ಹಾಕಿ

**<u>ಸೂಚನೆ :</u>** ಇಲ್ಲಿ ಉಪಯೋಗಿಸುವ " **ಸಾಮಾನ್ಯ ನಿವಾಸಿಗಳು**" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ 1950 ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ : ಬಿಸಿ/12028/2/76 ಎಸ್.ಸಿ.ಟಿ.–1 ಗೃಹಮಂತ್ರಾಲಯದ ಅನುಸಾರವಾಗಿ ಅಂಥ ಪ್ರಮಾಣ ಪತ್ರ ನೀಡಲು ಸಕ್ರಮವಾಗಿರುವುದಕ್ಕಾಗಿ ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಅಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ –13/2/74 ಇ,ಎಸ್.ಟಿ (ಎಸ್.ಸಿ.ಟಿ) ದಿನಾಂಕ 5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು ತನ್ನ ಖಾಯಂ ವಾಸಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧ ಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಆದೇಶ ಸಂಖ್ಯೆ :ಎಸ್.ಡಬ್ಲ್ಯು.ಡಿ. 132 ಎಸ್.ಎ.ಡಿ. 97 ಬೆಂಗಳೂರು ದಿನಾಂಕ 08–02–2000 ಕ್ಕೆ ಸಂಬಂಧಿಸಿದಂತೆ)

**************

## <u>ನಮೂನೆ –ಇ</u>

(ನಿಯಮ 3ಎ (2) (3) ನೋಡಿ)

### (ಹಿಂದುಳಿದ ವರ್ಗಗ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ)

-----------------ಗ್ರಾಮ/ ಪಟ್ಟಣ /ನಗರದ ನಿವಾಸಿಯಾದ ಶ್ರೀ/ಶ್ರೀಮತಿ---------------

ಇವರು ಹಿಂದುಳಿದ ವರ್ಗಗಳ (ಪ್ರವರ್ಗ)----------ಜಾತಿಯ ----------------------ಉಪಜಾತಿಗೆ

ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ :

--------------ತಾಲ್ಲೂಕು ಕಛೇರಿಯ ಮೊಹರು

(ಆದೇಶ ಸಂಖ್ಯೆ :ಎಸ್.ಡಬ್ಲ್ಯು.ಡಿ. 132 ಎಸ್.ಎ.ಡಿ. 97 ಬೆಂಗಳೂರು ದಿನಾಂಕ 08–02–2000 ಕ್ಕೆ ಸಂಬಂಧಿಸಿದಂತೆ)

**<u>ನಮೂನೆ – ಎಫ್</u>**

(ನಿಯಮ 3ಎ (2) (3) ನ್ನು ನೋಡಿ)

**(ಹಿಂದುಳಿದ ವರ್ಗ –2ಎ, 2ಬಿ, 3ಎ, 3ಬಿ ಗಳಿಗೆ ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ)**

------------------------------ ರಲ್ಲಿ ವಾಸವಗಿರುವ ಶ್ರೀ/ ಶ್ರೀಮತಿ --------------

ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ -----------------------------

ಇವರು ಮತ್ತು ಆತನ/ಆವಳ ತಂದೆ/ ತಾಯಿ/ ಪೋಷಕರು/ ಪತ್ನಿ/ ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30–03–3002 ರಲ್ಲಿ ನಿರ್ದಿಷ್ಟ ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ / ತಾಯಿ/ ಪೋಷಕರಾಗಲಿ/ ಪತ್ನಿ / ಪತ್ನಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

**ಅಥವಾ**

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

**ಅಥವಾ** ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

**ಅಥವಾ**

